ಕರ್ನಾಟಕ ಸರ್ಕಾರ

ಆಗಸ್ಟ್ 2, 2017

# ಆದಾಯ ತೆರಿಗೆ ದಾಳಿ : ಮುಖ್ಯಮಂತ್ರಿ ಪ್ರತಿಕ್ರಿಯೆ

ಬೆಂಗಳೂರು, ಆಗಸ್ಟ್ 2:

ಇಂಧನ ಸಚಿವ ಡಿ. ಕೆ. ಶಿವಕುಮಾರ್ ಅವರನ್ನು ಗುರಿಯಾಗಿಸಿಕೊಂಡು ಆದಾಯ ತೆರಿಗೆ ಅಧಿಕಾರಿಗಳು ಇಂದು ನಡೆಸಿರುವ ದಾಳಿ ಸಂಪೂರ್ಣ ರಾಜಕೀಯ ಪ್ರೇರಿತ. ಇದರ ಹಿಂದೆ ಕೇಂದ್ರ ಸರ್ಕಾರದ ಕೈವಾಡವಿರುವುದು ಜಗಜ್ಜಾಹೀರಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಕ್ರಿಯಿಸಿದ್ದಾರೆ.

ತನ್ನ ರಾಜಕೀಯ ಷಡ್ಯಂತ್ರಕ್ಕೆ ಆದಾಯ ತೆರಿಗೆ ಇಲಾಖೆಯನ್ನು ಬಳಸಿಕೊಳ್ಳುವುದು ಕೇಂದ್ರ ಸರ್ಕಾರಕ್ಕೆ ಶೋಭೆ ತರುವುದಿಲ್ಲ. ಇಂತಹ ಬೆದರಿಕೆ ತಂತ್ರಗಳಿಗೆ ರಾಜ್ಯ ಸರ್ಕಾರ ಬಗ್ಗುವುದೂ ಇಲ್ಲ. ದಾಳಿ ಸಂದರ್ಭದಲ್ಲಿ ನಿಯಮಾನುಸಾರ ಅಧಿಕಾರಿಗಳು ಸ್ಥಳೀಯ ಪೊಲೀಸರ ನೆರವು ಪಡೆದುಕೊಳ್ಳಬೇಕು. ಆದರೆ ನಿಯಮ ಉಲ್ಲಂಘಿಸಿ ಕೇಂದ್ರ ಮೀಸಲು ಪೊಲೀಸ್ ಪಡೆಯ ಸಿಬ್ಬಂದಿಯನ್ನು ಬಳಸಿಕೊಳ್ಳಲಾಗಿದೆ ಎಂದು ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಆದಾಯ ತೆರಿಗೆ ಅಧಿಕಾರಿಗಳು ನಿಯಮಾನುಸಾರ ದಾಳಿ ಮಾಡಿ ತನಿಖೆ ನಡೆಸಲಿ. ಜನತೆಗೆ ಸತ್ಯ ತಿಳಿಸಲಿ. ಆದರೆ, ರಾಜಕೀಯ ದ್ವೇಷದ ಹಿನ್ನೆಲೆಯಲ್ಲಿ ಈ ರೀತಿಯ ದಾಳಿ ನಡೆಸಿದರೆ ಮುಂದೆ ಭಾರತೀಯ ಜನತಾ ಪಕ್ಷಕ್ಕೆ ಜನತೆ ತಕ್ಕ ಪಾಠ ಕಲಿಸುತ್ತಾರೆ. ತನ್ನ ವಿರುದ್ಧ ಧ್ವನಿ ಎತ್ತುವವರ ಮೇಲೆ ಭಾರತೀಯ ಜನತಾ ಪಕ್ಷವು ಆದಾಯ ತೆರಿಗೆ ದಾಳಿ ಎಂಬ ಬ್ರಹ್ಮಾಸ್ತ್ರವನ್ನು ಪ್ರಯೋಗ ಮಾಡುತ್ತಿದೆ. ಇದು ಪ್ರಜಾಪ್ರಭುತ್ವ ವಿರೋಧಿ ಧೋರಣೆಯಾಗಿದೆ ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

***********

ಡಿ ಪಿ ಎಂ